RPAN

**ಕರ್ನಾಟಕ ಸರ್ಕಾರ**

ಸಂಖ್ಯೆ:ಆರ್‌ಡಿ 58 ಎಲ್‌ಜಿಟಿ 2021

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:17.11.2021

2242
E-2422339
15/12/21

**ಇವರಿಂದ,**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕಂದಾಯ ಇಲಾಖೆ,
ಬೆಂಗಳೂರು.

**ಇವರಿಗೆ,**
ಜಿಲ್ಲಾಧಿಕಾರಿ,
ತುಮಕೂರು ಜಿಲ್ಲೆ,
ತುಮಕೂರು.

ಮಾನ್ಯರೇ,

LND 4 DEC 2021

**ವಿಷಯ:** ಭದ್ರಾ ಮೇಲ್ದಂಡೆ ಯೋಜನೆಯ ತುಮಕೂರು ಶಾಖಾ ಕಾಲುವೆಯ ನಿರ್ಮಾಣಕ್ಕಾಗಿ ತುಮಕೂರು ಜಿಲ್ಲೆ, ಚಿಕ್ಕನಾಯಕನಹಳ್ಳಿ ತಾಲ್ಲೂಕು, ಕಂದಿಕೆರೆ ಹೋಬಳಿ, ಮೈಲುಕಬ್ಬೆ ಗ್ರಾಮದ ಸರ್ವೆ ನಂ.57ರ ಸರ್ಕಾರಿ ಖರಾಬು ಜಮೀನಿನಲ್ಲಿ ವಿಸ್ತೀರ್ಣ 42-84 ಹೆಕ್ಟೇರ್ (106-00 ಎಕರೆ/ಗುಂಟೆ) ಜಮೀನನ್ನು ಪರ್ಯಾಯ ಅರಣ್ಯೀಕರಣಕ್ಕಾಗಿ ಅರಣ್ಯ ಇಲಾಖೆಗೆ ವರ್ಗಾವಣೆ ಮಾಡಲು ಪೂರ್ವಾನುಮೋದನೆ ನೀಡಲು ಕೋರಿರುವ ಬಗ್ಗೆ.

**ಉಲ್ಲೇಖ:** ತಮ್ಮ ಪತ್ರ ಸಂಖ್ಯೆ:ಎಲ್‌ಎನ್‌ಡಿ(ಸಿಎನ್‌ಹೆಚ್)73:2020-2021, ದಿನಾಂಕ:27.09.2021

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಭದ್ರಾ ಮೇಲ್ದಂಡೆ ಯೋಜನೆಯ ತುಮಕೂರು ಶಾಖಾ ಕಾಲುವೆಯ ನಿರ್ಮಾಣಕ್ಕಾಗಿ ತುಮಕೂರು ಜಿಲ್ಲೆ, ಚಿಕ್ಕನಾಯಕನಹಳ್ಳಿ ತಾಲ್ಲೂಕು, ಹುಳಿಯಾರು ಹೋಬಳಿ, ಬೆಳ್ಳಾರ ಗ್ರಾಮದ ಸ.ನಂ.33ರ ಮೀಸಲು ಅರಣ್ಯ ಪ್ರದೇಶದಲ್ಲಿ ವಿಸ್ತೀರ್ಣ 61-00 ಹೆಕ್ಟೇರ್ ಅರಣ್ಯ ಇಲಾಖೆಯ ಜಮೀನನ್ನು ಬಳಕೆ ಮಾಡಬೇಕಾಗಿರುವುದರಿಂದ, ತುಮಕೂರು ಜಿಲ್ಲೆ, ಚಿಕ್ಕನಾಯಕನಹಳ್ಳಿ ತಾಲ್ಲೂಕು ಕಂದಿಕೆರೆ ಹೋಬಳಿ, ಮೈಲುಕಬ್ಬೆ ಗ್ರಾಮದ ಸರ್ವೆ ನಂ.57ರ ಸರ್ಕಾರಿ ಜಮೀನಿನ ವಿಸ್ತೀರ್ಣ 42-84 ಹೆಕ್ಟೇರ್ (106-00 ಎಕರೆ/ಗುಂಟೆ) ಸರ್ಕಾರಿ "ಖರಾಬು" ಜಮೀನನ್ನು ಕರ್ನಾಟಕ ಭೂ ಕಂದಾಯ ಕಾಯ್ದೆ-1964ರ ಕಲಂ-68ರಡಿ ಸಾರ್ವಜನಿಕ ಹಕ್ಕಿನಿಂದ ವಿಹಿತಗೊಳಿಸಿ ನಿಯಮಾನುಸಾರ ಕ್ರಮವಹಿಸುವ ಷರತ್ತುಗೊಳಪಟ್ಟು, ಕರ್ನಾಟಕ ಭೂ ಮಂಜೂರಾತಿ ನಿಯಮಗಳು-1969ರ ನಿಯಮ-22(ಎ)(3)(i)ರಡಿ ಭದ್ರಾ ಮೇಲ್ದಂಡೆ ಯೋಜನೆಯ ತುಮಕೂರು ಶಾಖಾ ಕಾಲುವೆಯ ನಿರ್ಮಾಣದ ಉದ್ದೇಶಕ್ಕಾಗಿ ಪರ್ಯಾಯ ಅರಣ್ಯೀಕರಣಕ್ಕಾಗಿ ಅರಣ್ಯ ಇಲಾಖೆಗೆ ಉಚಿತವಾಗಿ ವರ್ಗಾಯಿಸಲು ಸರ್ಕಾರದ ಪೂರ್ವಾನುಮೋದನೆಯನ್ನು ನೀಡಲಾಗಿದೆ ಎಂದು ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

**(ಪ್ರಸ್ತಾವನೆಗೆ ಸಂಬಂಧಿಸಿದ ವಿಶಿಷ್ಟ ಕಡತವನ್ನು ಈ ಪತ್ರಕ್ಕೆ ಲಗತ್ತಿಸಿ ಹಿಂದಿರುಗಿಸಲಾಗಿದೆ).**

ತಮ್ಮ ನಂಬುಗೆಯ,

18/11/21

(ಎ.ಜಿ.ವೀಣಾ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ (ಭೂ ಮಂಜೂರಾತಿ-3).